**All India Radio: Bangalore**
**National Bulletin In Kannada**
**26.04.2025 13.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಯುವಶಕ್ತಿಯೇ ರಾಷ್ಟ್ರದ ಪ್ರಗತಿಯ ಆಧಾರ - ಪ್ರಧಾನಿ ನರೇಂದ್ರ ಮೋದಿ ಅಭಿಮತ
2. ಇಟಲಿಯ ರೋಮ್‌ನಲ್ಲಿ ಕೆಲವೇ ಕ್ಷಣಗಳಲ್ಲಿ ಪೋಪ್ ಫ್ರ್ಯಾನ್ಸಿಸ್ ಅಂತ್ಯಕ್ರಿಯೆ
3. ಉಡಾನ್ ಯೋಜನೆಯಿಂದ ಒಂದು ಕೋಟಿ ೪೯ ಲಕ್ಷಕ್ಕೂ ಅಧಿಕ ಪ್ರಯಾಣಿಕರಿಗೆ ಪ್ರಯೋಜನ
4. ಪಹಲ್ಗಾಮ್ ಭಯೋತ್ಪಾದಕ ದಾಳಿ; ವಿಶ್ವಸಂಸ್ಥೆ ಭದ್ರತಾ ಮಂಡಳಿಯಿಂದ ತೀವ್ರ ಖಂಡನೆ
5. ಐಪಿಎಲ್ ಟಿ-೨೦ ಕ್ರಿಕೆಟ್: ಇಂದು ಕೋಲ್ಕತ್ತಾ ನೈಟ್ ರೈಡರ್ಸ್ - ಪಂಜಾಬ್ ಕಿಂಗ್ಸ್ ಮುಖಾಮುಖಿ

<><><><>

ಉದ್ಯೋಗ ಸೃಷ್ಟಿಗೆ ಹೆಚ್ಚಿನ ಆದ್ಯತೆ ನೀಡುವ ನಿಟ್ಟಿನಲ್ಲಿ ೧೫ನೇ ಉದ್ಯೋಗ ಮೇಳವನ್ನು ದೇಶಾದ್ಯಂತ ೪೭ ಸ್ಥಳಗಳಲ್ಲಿ ಇಂದು ನಡೆಸಲಾಗುತ್ತಿದೆ. ಇದರ ಭಾಗವಾಗಿ ಪ್ರಧಾನಿ ನರೇಂದ್ರ ಮೋದಿ ಇಂದು ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ಹೊಸದಾಗಿ ನೇಮಕಗೊಂಡ ಯುವಕರಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ೫೧ ಸಾವಿರಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ವಿತರಿಸಿದರು. ಇದೇ ವೇಳೆ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಇಂದು ಯುವಜನತೆಗೆ ಶಾಶ್ವತ ಸರ್ಕಾರಿ ಉದ್ಯೋಗಗಳ ಪತ್ರಗಳನ್ನು ನೀಡಲಾಗಿದೆ. ಇದರ ಮೂಲಕ ಭಾರತ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಯುವಜನರ ಮೇಲೆ ಹೊಸ ಜವಾಬ್ದಾರಿಗಳು ಆರಂಭವಾಗಿದೆ. ದೇಶದ ಆರ್ಥಿಕ ವ್ಯವಸ್ಥೆಯನ್ನು ಬಲಪಡಿಸುವುದು, ಆಂತರಿಕ ಭದ್ರತೆಯನ್ನು ಬಲಪಡಿಸುವುದು, ದೇಶದಲ್ಲಿ ಆಧುನಿಕ ಮೂಲಸೌಕರ್ಯಗಳನ್ನು ನಿರ್ಮಿಸುವುದು, ಕಾರ್ಮಿಕರ ಜೀವನದಲ್ಲಿ ಮೂಲಭೂತ ಬದಲಾವಣೆ ತರುವುದು ಎಲ್ಲರ ಜವಾಬ್ದಾರಿಯಾಗಿದೆ. ತಮ್ಮ ತಮ್ಮ ಕರ್ತವ್ಯಗಳನ್ನು ಪ್ರಾಮಾಣಿಕವಾಗಿ ಪೂರ್ಣಗೊಳಿಸಿದ್ದಲ್ಲಿ ವಿಕಸಿತ ಭಾರತದತ್ತ ದೇಶದ ಪಯಣದಲ್ಲಿ ಹೆಚ್ಚು

ಸಕಾರಾತ್ಮಕ ಪರಿಣಾಮ ಕಂಡುಬರಲಿದೆ ಎಂದರು. ಯುವಶಕ್ತಿಯೇ ಒಂದು ರಾಷ್ಟ್ರದ ಪ್ರಗತಿಯ ಆಧಾರ ವಾಗಿರುತ್ತದೆ. ರಾಷ್ಟ್ರ ನಿರ್ಮಾಣದಲ್ಲಿ ಯುವಜನತೆ ಭಾಗಿಯಾದಾಗ ತ್ವರಿತ ಅಭಿವೃದ್ಧಿಯ ಜೊತೆಗೆ ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಳ್ಳಲು ಸಾಧ್ಯ ಎಂದು ಹೇಳಿದರು. ದೇಶದಲ್ಲಿ ಯುವಕರಿಗೆ ಉದ್ಯೋಗಾವಕಾಶ ಮತ್ತು ಸ್ವ ಉದ್ಯೋಗದ ಅವಕಾಶಗಳು ಬೆಳೆಯಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆ. ಸ್ಕಿಲ್ ಇಂಡಿಯಾ, ಸ್ಟಾರ್ಟ್ ಅಪ್ ಇಂಡಿಯಾ, ಡಿಜಿಟಲ್ ಇಂಡಿಯಾ ಈ ರೀತಿಯ ಅನೇಕ ಅಭಿಯಾನಗಳು ಯುವಕರಿಗೆ ಹೊಸ ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿದೆ ಎಂದು ತಿಳಿಸಿದರು.

**ಧ್ವನಿ : ಪ್ರಧಾನಿ**

ಈ ಯೋಜನೆಗಳ ಮೂಲಕ ಯುವಕರಿಗೆ ತಮ್ಮ ತಮ್ಮ ಪ್ರತಿಭೆಗಳನ್ನು ಅನಾವರಣಗೊಳಿಸಲು ವೇದಿಕೆ ಒದಗಿಸಲಾಗುತ್ತಿದೆ. ಇದರ ಪರಿಣಾಮವಾಗಿ ಈ ದಶಕದಲ್ಲಿ ತಂತ್ರಜ್ಞಾನ ದತ್ತಾಂಶ ಮತ್ತು ನಾವಿನ್ಯತೆ ಕ್ಷೇತ್ರದಲ್ಲಿ ಭಾರತವನ್ನು ಜಾಗತಿಕವಾಗಿ ಹೊಸ ಎತ್ತರಕ್ಕೆ ಕೊಂಡೊಯ್ಯಲಾಗಿದೆ. ಈ ಬಾರಿಯ ಬಜೆಟ್‌ನಲ್ಲಿ ಉತ್ಪಾದನಾ ಯೋಜನೆ ಕುರಿತು ಘೋಷಣೆ ಮಾಡಲಾಗಿದ್ದು, ಮೇಕ್ ಇನ್ ಇಂಡಿಯಾ ಉಪಕ್ರಮಕ್ಕೆ ಉತ್ತೇಜನ ನೀಡುವುದು ಹಾಗೂ ಭಾರತದ ಯುವಕರಿಗೆ ಜಾಗತಿಕ ಗುಣಮಟ್ಟದ ಉತ್ಪನ್ನಗಳನ್ನು ಉತ್ಪಾದಿಸಲು ಅವಕಾಶ ಒದಗಿಸುವುದು ಇದರ ಉದ್ದೇಶವಾಗಿದೆ ಎಂದು ಪ್ರಧಾನಿ ತಿಳಿಸಿದರು.

*****ಧ್ವನಿ ***ಪಿಎಂ**

ಕರ್ನಾಟಕದ ಹುಬ್ಬಳ್ಳಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೇಂದ್ರದ ಯುವ ವ್ಯವಹಾರ ಮತ್ತು ಕ್ರೀಡಾ ರಾಜ್ಯ ಸಚಿವೆ ರಕ್ಷಾ ನಿಖಿಲ್ ಖಡ್ಸೆ ಸುಮಾರು ೫೦ ಮಂದಿಗೆ ಉದ್ಯೋಗ ನಿಯುಕ್ತಿ ಪತ್ರ ವಿತರಿಸಿದರು. ಬೆಂಗಳೂರಿನ ಕ್ವೀನ್ಸ್ ರಸ್ತೆಯಲ್ಲಿರುವ ಕಾವೇರಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮಕ್ಕೆ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಚಾಲನೆ ನೀಡಿದರು. ಬೆಂಗಳೂರಿನ ಜಾಲಹಳ್ಳಿಯಲ್ಲಿರುವ ಕಸ್ಟಮ್ಸ್ ಪರೋಕ್ಷ ತೆರಿಗೆ ಮತ್ತು ಮಾದಕ ದ್ರವ್ಯಗಳ ರಾಷ್ಟ್ರೀಯ ಸಂಸ್ಥೆಯ ಆವರಣದಲ್ಲಿ ನಡೆದ ಉದ್ಯೋಗ ಮೇಳದಲ್ಲಿ ಕೇಂದ್ರ ಸಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ಡಾ. ವೀರೇಂದ್ರ ಕುಮಾರ್ ಉದ್ಯೋಗ ನಿಯುಕ್ತಿ ಪತ್ರ ವಿತರಣೆ ಮಾಡಿದರು.

<><><><>

ಕ್ಯಾಥೋಲಿಕ್ ಧರ್ಮಗುರು ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆ ರೋಮ್‌ನಲ್ಲಿರುವ ಸೇಂಟ್ ಮೇರಿ ಮೇಜರ್ ಬೆಸಿಲಿಕಾದಲ್ಲಿ ನಡೆಯಲಿದೆ. ವ್ಯಾಟಿಕನ್ ನಗರದ ಸೇಂಟ್ ಪೀಟರ್ಸ್ ಚೌಕದಲ್ಲಿ ಭಾರತೀಯ ಕಾಲಮಾನ ಅಪರಾಹ್ನ ೧.೩೦ಕ್ಕೆ ಅಂತ್ಯಕ್ರಿಯೆ ಪ್ರಕ್ರಿಯೆ ಆರಂಭವಾಗಲಿದೆ. ಅಂತ್ಯಕ್ರಿಯೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಭಾರತ ಸರ್ಕಾರ ಮತ್ತು ಜನರ ಪರವಾಗಿ ಸಂತಾಪ ಸೂಚಿಸಲಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯಲ್ ಮ್ಯಾಕ್ರಾನ್, ಬ್ರೆಜಿಲ್ ಅಧ್ಯಕ್ಷ ಲೂಯಿಸ್ ಇನಾಸಿಯೊ ಲೂಲಾ ಡಾಸಿಲ್ವಾ ಮತ್ತು ಅರ್ಜೆಂಟಿನಾ ಅಧ್ಯಕ್ಷ ಜೇವಿಯರ್ ಮಿಲಿ ಸೇರಿದಂತೆ ವಿವಿಧ ರಾಷ್ಟ್ರಗಳ ಅಧ್ಯಕ್ಷರು ಮತ್ತಿತರ ಗಣ್ಯರು ಪಾಲ್ಗೊಳ್ಳುವ ನಿರೀಕ್ಷೆ ಇದೆ. ಕಳೆದ ಒಂದು ಶತಮಾನದಲ್ಲಿ ವ್ಯಾಟಿಕನ್ ನಗರದ ಹೊರಗೆ ಪೋಪ್ ಒಬ್ಬರ ಅಂತ್ಯಕ್ರಿಯೆ ನಡೆಯುತ್ತಿರುವುದು ಇದೇ ಮೊದಲನೇ ಬಾರಿಯಾಗಿದೆ. ೧೯೦೩ರಲ್ಲಿ ಪೋಪ್ ೧೩ನೇ ಲಿಯೋ ಅಂತ್ಯ ಸಂಸ್ಕಾರ ವ್ಯಾಟಿಕನ್ ನಗರದ ಹೊರಗೆ ನಡೆದಿತ್ತು. ರಾಷ್ಟ್ರಪತಿ ದ್ರೌಪದಿ ಮುರ್ಮು, ನಿನ್ನೆ ಇಟಲಿಯ ರೋಮ್ ತಲುಪಿ, ವ್ಯಾಟಿಕನ್ ನಗರದ ಸೇಂಟ್ ಪೀಟರ್ ಬೆಸಿಲಿಕಾದಲ್ಲಿ ಪೋಪ್ ಫ್ರಾನ್ಸಿಸ್ ಅವರಿಗೆ ಪುಷ್ಪನಮನ ಸಲ್ಲಿಸಿದರು. ಅವರೊಂದಿಗೆ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಅಲ್ಪಸಂಖ್ಯಾತ ವ್ಯವಹಾರಗಳ ರಾಜ್ಯ ಸಚಿವ ಜಾರ್ಜ್ ಕುರಿಯನ್ ಮತ್ತು ಗೋವಾ ವಿಧಾನಸಭೆ ಉಪ ಸಭಾಧ್ಯಕ್ಷ ಜೋಶುವಾ ಡಿಸೋಜ ಇಟಲಿಗೆ ತೆರಳಿದ್ದಾರೆ.

ಈಗಾಗಲೇ ಕೇಂದ್ರ ಸರ್ಕಾರ ಮೂರು ದಿನಗಳ ಶೋಕಾಚರಣೆ ಘೋಷಿಸಿದ್ದು, ಎರಡು ದಿನಗಳ ಶೋಕಾಚರಣೆ ಈ ತಿಂಗಳ ೨೨, ೨೩ರಂದು ನಡೆಸಲಾಗಿದ್ದು, ಅಂತ್ಯಕ್ರಿಯೆ ಹಿನ್ನೆಲೆ ಇಂದೂ ಕೂಡ ದೇಶಾದ್ಯಂತ ಶೋಕಾಚರಣೆ ಘೋಷಿಸಲಾಗಿದೆ.

<><><><>

ಉಡಾನ್ ಯೋಜನೆಯಿಂದ ಒಂದು ಕೋಟಿ ೪೯ ಲಕ್ಷಕ್ಕೂ ಅಧಿಕ ಪ್ರಯಾಣಿಕರಿಗೆ ಪ್ರಯೋಜನವಾಗಿದೆ ಎಂದು ಸರ್ಕಾರ ತಿಳಿಸಿದೆ. ಈ ಕುರಿತು ಮಾಹಿತಿ ಹಂಚಿಕೊಂಡಿರುವ ನಾಗರಿಕ ವಿಮಾನಯಾನ ಸಚಿವಾಲಯ, ದೇಶಾದ್ಯಂತ ೯೦ ವಿಮಾನ ನಿಲ್ದಾಣಗಳನ್ನು ಸಂಪರ್ಕಿಸುವ ೬೨೫ ಉಡಾನ್ ಮಾರ್ಗಗಳನ್ನು ಕಾರ್ಯಗತಗೊಳಿಸಲಾಗಿದೆ. ಭಾರತದ ವಿಮಾನ ನಿಲ್ದಾಣ ಜಾಲ ಒಂದು ದಶಕದಲ್ಲಿ ೭೪ರಿಂದ ೧೫೯ ವಿಮಾನ ನಿಲ್ದಾಣಗಳಿಗೆ

ದ್ವಿಗುಣಗೊಂಡಿದೆ ಎಂದು ತಿಳಿಸಿದೆ. ಅಸ್ಥಿತ್ವದಲ್ಲಿರುವ ವಿಮಾನ ನಿಲ್ದಾಣಗಳ ಅಭಿವೃದ್ಧಿ ಮೂಲಕ ವಿಮಾನ ಸೇವೆ ಪಡೆಯದ ಪ್ರದೇಶಗಳಿಗೆ ಸಂಪರ್ಕ ಒದಗಿಸಲು ಉಡಾನ್ ಯೋಜನೆಯನ್ನು ೨೦೧೬ರ ಅಕ್ಟೋಬರ್‌ನಲ್ಲಿ ಆರಂಭಿಸಲಾಯಿತು.

<><><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೨೧ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ.  ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

<><><><>

ಪೆಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ವಿಶ್ವಸಂಸ್ಥೆ ಭದ್ರತಾ ಮಂಡಳಿ ತೀವ್ರವಾಗಿ ಖಂಡಿಸಿದೆ. ಬಿಡುಗಡೆಗೊಳಿಸಿರುವ ಹೇಳಿಕೆಯಲ್ಲಿ ಮಂಡಳಿ ಸದಸ್ಯರು, ಜಾಗತಿಕ ಶಾಂತಿಗೆ ಭಯೋತ್ಪಾದನೆ ಒಂದು ಪ್ರಮುಖ ಸವಾಲಾಗಿದ್ದು, ಅದರ ವಿರುದ್ಧ ಹೋರಾಟ ಅಗತ್ಯ. ಅಂತಾರಾಷ್ಟ್ರೀಯ ಕಾನೂನಿನಡಿಯಲ್ಲಿ ಈ ದಾಳಿಯಲ್ಲಿ ಭಾಗವಹಿಸಿದವರು, ಸಂಚುಕೋರರು ಮತ್ತು ಪ್ರೋತ್ಸಾಹಕರನ್ನು ಶಿಕ್ಷೆಗೊಳಪಡಿಸಲು ಎಲ್ಲಾ ರಾಷ್ಟ್ರಗಳ ಸಹಕಾರ ಅಗತ್ಯ ಎಂದು ತಿಳಿಸಲಾಗಿದೆ.

<><><><>

ಪಾಕಿಸ್ತಾನ ಮೂರು ದಶಕಗಳಿಂದ ಭಯೋತ್ಪಾದಕ ಗುಂಪುಗಳನ್ನು ಬೆಂಬಲಿಸುತ್ತಿದೆ ಎಂದು ಪಾಕಿಸ್ತಾನದ ರಕ್ಷಣಾ ಸಚಿವ ಖವಾಜ ಮೊಹಮ್ಮದ್ ಆಸಿಫ್ ಒಪ್ಪಿಕೊಂಡಿದ್ದಾರೆ. ಬ್ರಿಟೀಷ್ ಸುದ್ದಿವಾಹಿನಿಯೊಂದಕ್ಕೆ ನೀಡಿದ ಸಂದರ್ಶನದಲ್ಲಿ, ಪಾಕಿಸ್ತಾನ ಭಯೋತ್ಪಾದಕ ಸಂಘಟನೆಗಳಿಗೆ ಹಣಕಾಸು ಒದಗಿಸುವ ಮತ್ತು ಬೆಂಬಲಿಸಿರುವ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಪಾಶ್ಚಿಮಾತ್ಯ ದೇಶಗಳ ಪರವಾಗಿ ಪಾಕಿಸ್ತಾನ ಈ ಕೆಲಸದಲ್ಲಿ ಭಾಗಿಯಾಗಿದೆ. ಆ ನಿರ್ಧಾರ ಈಗ ತಪ್ಪು ಅರಿವಾಗಿದ್ದು, ತನ್ನ ಕ್ರಮಗಳಿಗೆ ಪಾಕಿಸ್ತಾನ ಭಾರಿ ಬೆಲೆ ತೆತ್ತಿದೆ ಎಂದರು. ಸೋವಿಯಟ್ ಆಫ್ಘನ್ ಯುದ್ಧ ಮತ್ತು ತಾಲಿಬಾನ್ ವಿರುದ್ಧದ ಹೋರಾಟದಲ್ಲಿ ಅಮೆರಿಕ ಪರವಾಗಿ ನಿಲುವು ತಾಳದೇ

ಇದ್ದಿದ್ದರೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪಾಕಿಸ್ತಾನದ ಕುರಿತ ಅಭಿಪ್ರಾಯಗಳು ಬೇರೆ ಇರುತ್ತಿದ್ದವು ಎಂದಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ದಾಳಿಯ ಬೆನ್ನಲ್ಲೇ ಪಾಕಿಸ್ತಾನ ಸಚಿವರಿಂದ ಈ ಹೇಳಿಕೆ ಹೊರಬಂದಿದ್ದು, ಪ್ರಾದೇಶಿಕ ಅಸ್ಥಿತರತೆಯಲ್ಲಿ ಪಾಕಿಸ್ತಾನದ ಈ ಹಿಂದಿನ ಪಾಲ್ಗೊಳ್ಳುವಿಕೆಯ ಕುರಿತು ಹೊಸ ಕಳವಳಗಳನ್ನು ಹುಟ್ಟಿಹಾಕಿದೆ. ಈ ನಡುವೆ, ನಿನ್ನೆ ರಾತ್ರಿ ಜಮ್ಮು ಕಾಶ್ಮೀರ ಪ್ರದೇಶದಲ್ಲಿ ಪಾಕಿಸ್ತಾನ ನಿಯಂತ್ರಣ ರೇಖೆ ಉದ್ದಕ್ಕೂ ಅನೇಕ ಸ್ಥಳಗಳಲ್ಲಿ ಪಾಕ್ ಕದನ ವಿರಾಮ ಉಲ್ಲಂಘನೆ ಮಾಡಿದೆ ಎಂದು ವರದಿಯಾಗಿದೆ. ಈ ಉಲ್ಲಂಘನೆಗೆ ಭಾರತೀಯ ಪಡೆಗಳು ಸೂಕ್ತವಾಗಿ ಪ್ರತಿಕ್ರಿಯಿಸಿವೆ. ಗುಂಡಿನ ಚಕಮಕಿ ಸಣ್ಣಮಟ್ಟದಲ್ಲಿ ನಡೆದಿದ್ದು, ಭಾರತೀಯ ಪಡೆಗಳು ತಕ್ಕ ಪ್ರತ್ಯುತ್ತರ ನೀಡಿವೆ. ಯಾವುದೇ ಸಾವು-ನೋವು ವರದಿಯಾಗಿಲ್ಲ.

<><><><>

ಜಮ್ಮು ಮತ್ತು ಕಾಶ್ಮೀರದಲ್ಲಿ ವೈಷ್ಣೋದೇವಿ ಯಾತ್ರಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಮೇ ಮೊದಲ ವಾರದ ವೇಳೆಗೆ ರಿಯಾಸಿ ಜಿಲ್ಲೆಯ ಕತ್ರಾ ಪಟ್ಟಣದಲ್ಲಿ ಸಮಗ್ರ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರ ಐಸಿಸಿಸಿ ಕಾರ್ಯರೂಪಕ್ಕೆ ಬರಲಿದೆ.

<><><><>

ಇಂಡಿಯಾ ಆಡಿಯೋ ಶೃಂಗಸಭೆ ಮತ್ತು ಪ್ರಶಸ್ತಿಗಳು ೨೦೨೫ರ ವಿವಿಧ ವಿಭಾಗಗಳಲ್ಲಿ ಆಕಾಶವಾಣಿಗೆ ಒಟ್ಟು ಆರು ಪ್ರಶಸ್ತಿಗಳು ಸಂದಿವೆ. ಮುಂಬೈನಲ್ಲಿ ನಿನ್ನೆ ಮೂರನೇ ಆವೃತ್ತಿಯ ಇಂಡಿಯಾ ಆಡಿಯೋ ಶೃಂಗಸಭೆ ಮತ್ತು ಪ್ರಶಸ್ತಿಗಳು ೨೦೨೫ ಕಾರ್ಯಕ್ರಮ ನಡೆಯಿತು. ರೇಡಿಯೋ ಮತ್ತು ಆಡಿಯೋ ವಿಷಯ ರಚನೆಯಲ್ಲಿ ಉತ್ಕೃಷ್ಟತೆಯನ್ನು ಗುರುತಿಸುವ ಪ್ರಶಸ್ತಿಗಳಿಗೆ ಹಲವು ರೇಡಿಯೋ ಕಾರ್ಯಕ್ರಮಗಳನ್ನು ಆಯ್ಕೆ ಮಾಡಲಾಗಿದೆ.

<><><><>

ಖಾಸಗಿ ಗುತ್ತಿಗೆದಾರರು ಮತ್ತು ರೈಲ್ವೆ ಅಧಿಕಾರಿಗಳ ನಡುವೆ ನಡೆದಿದ್ದ ಅಕ್ರಮ ಲಂಚ ಪ್ರಕರಣದಲ್ಲಿ ಆಗ್ನೇಯ ಮಧ್ಯ ರೈಲ್ವೆ ಮುಖ್ಯ ಅಭಿಯಂತರರು ಸೇರಿದಂತೆ ಇತರ ಮೂವರನ್ನು ಕೇಂದ್ರ ತನಿಖಾ ದಳ - ಸಿಬಿಐ ಬಂಧಿಸಿದೆ.

ಮುಖ್ಯ ಇಂಜಿನಿಯರ್ ವಿಶಾಲ್ ಆನಂದ್, ಜಾಜಹಾರಿಯಾ ನಿರ್ಮಾಣ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರು ಸೇರಿದಂತೆ ಮತ್ತಿಬ್ಬರ ವಿರುದ್ಧ ಸಿಬಿಐ ಪ್ರಕರಣ ದಾಖಲಿಸಿಸಿದೆ. ವಿವಿಧ

ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಖಾಸಗಿ ಸಂಸ್ಥೆಗಳಿಗೆ ಅನುಕೂಲವಾಗಿಸಲು ಅವುಗಳಿಂದ ಲಂಚ ಪಡೆದು, ಭ್ರಷ್ಟಾಚಾರದಲ್ಲಿ ವಿಶಾಲ್ ಆನಂದ್ ತೊಡಗಿದ್ದರು ಎಂದು ಸಿಬಿಐ ಆರೋಪಿಸಿದೆ.

<><><><>

ಕೋಲ್ಕತ್ತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>